# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1429 |
| 2 | ಸದಸ್ಯರ ಹೆಸರು | ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) |
| 3 | ವಿಷಯ | ಬೀದರ್ ಜಿಲ್ಲೆಯಲ್ಲಿ ರೇಷ್ಮೆ ಅಭಿವೃದ್ಧಿಪಡಿಸುವ ಕುರಿತು. |
| 4 | ಉತ್ತರಿಸುವ ದಿನಾಂಕ | 30.12.2022 |
| 5 | ಉತ್ತರಿಸುವವರು | ಮಾನ್ಯ ರೇಷ್ಮೆ, ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು |
| | **ಪ್ರಶ್ನೆಗಳು** | **ಉತ್ತರಗಳು** |
| ಅ | ಬೀದರ ಜಿಲ್ಲೆಯಲ್ಲಿ ರೇಷ್ಮೆ ಬೆಳೆಯನ್ನು ಅಭಿವೃದ್ಧಿಪಡಿಸುವ ವಾತಾವರಣವಿದ್ದರು ಬೆಂಬಲ ನೀಡದಿರಲು ಕಾರಣವೇನು: | ಜಿಲ್ಲೆಯಲ್ಲಿ ರೇಷ್ಮೆ ಅಭಿವೃದ್ಧಿಗೆ ಪೂರಕ ವಾತವರಣವಿರುತ್ತದೆ. ರಾಜ್ಯದ ಇತರೆ ಜಿಲ್ಲೆಗಳಲ್ಲಿ ನೀಡುವ ಎಲ್ಲಾ ಯೋಜನೆಗಳನ್ನು ಬೀದರ ಜಿಲ್ಲೆಯ ರೇಷ್ಮೆ ಬೆಳೆಗಾರರಿಗೂ ಕೂಡ ನೀಡಲಾಗುತ್ತಿದೆ. ಮುಂದುವರೆದು, ಬೀದರ್ ಜಿಲ್ಲೆಯ ರೇಷ್ಮೆ ಬೆಳೆಗಾರರನ್ನು ಉತ್ತೇಜಿಸಲು ರೇಷ್ಮೆ ಇಲಾಖೆಯು ಕ್ಷೇತ್ರಮಟ್ಟದ ಎಲ್ಲಾ ಕಚೇರಿಗಳಲ್ಲಿ ರೇಷ್ಮೆ ಇಲಾಖೆಯಿಂದ ದೊರೆಯುವ ಸಹಾಯಧನ / ಪ್ರೋತ್ಸಾಹಧನ ಕಾರ್ಯಕ್ರಮಗಳು/ಯೋಜನೆಯ ವಿವರಗಳನ್ನು ಪ್ರದರ್ಶಿಸಲಾಗಿದೆ. ಇಲಾಖಾ ಯೋಜನೆಗಳ ಬಗ್ಗೆ ಕರಪತ್ರ, ಬ್ರೋಚರ್ ಮತ್ತು ಬಿತ್ತಿಪತ್ರಗಳ ಮೂಲಕ ರೇಷ್ಮೆ ಬೆಳೆಗಾರರಿಗೆ ಮಾಹಿತಿ ನೀಡಲಾಗುತ್ತಿದೆ. ಅಲ್ಲದೇ, ರೇಷ್ಮೆ ಬೆಳೆಗಾರರಿಗೆ ಕ್ಷೇತ್ರಮಟ್ಟದಲ್ಲಿ ಕಾರ್ಯಾಗಾರ, ಕ್ಷೇತ್ರೋತ್ಸವಗಳು, ವಸ್ತು ಪ್ರದರ್ಶನ, ಗ್ರಾಮ ಮಟ್ಟದಲ್ಲಿ ರೈತರಿಂದ ರೈತರಿಗೆ ತರಬೇತಿ, ರೇಷ್ಮೆ ತರಬೇತಿ ಸಂಸ್ಥೆಗಳಿಂದ ಕ್ಷೇತ್ರಮಟ್ಟದಲ್ಲಿ ಒಂದು ದಿನದ ತರಬೇತಿ ಕಾರ್ಯಕ್ರಮಗಳನ್ನು ಆಯೋಜಿಸಿ ರೇಷ್ಮೆ ಬೆಳೆಗಾರರಲ್ಲಿ ಇಲಾಖಾ ಯೋಜನೆಗಳ ಬಗ್ಗೆ ಅರಿವು ಮೂಡಿಸಲಾಗುತ್ತಿದೆ. ದೂರದರ್ಶನ ಹಾಗೂ ರೇಡಿಯೋ ಮೂಲಕ ವಿಜ್ಞಾನಿಗಳು, ತಾಂತ್ರಿಕ ಅಧಿಕಾರಿಗಳು ಚರ್ಚೆಗಳಲ್ಲಿ ಭಾಗವಹಿಸಿ ಅಗತ್ಯವಿರುವ ಸಂದರ್ಭಗಳಲ್ಲಿ ಯೋಜನೆಗಳ ಬಗ್ಗೆ ಮಾಹಿತಿಯನ್ನು ಒದಗಿಸಿ ಬೆಳೆಗಾರರನ್ನು ಪ್ರೋತ್ಸಾಹಿಸಲಾಗುತ್ತಿದೆ. |
| ಆ | ರೇಷ್ಮೆ ಬೆಳೆಯುತ್ತಿರುವ ಹಲವು ರೈತರಿಗೆ ಮಾರುಕಟ್ಟೆಗೆ ಹೋಗಲು ಅನಾನುಕೂಲವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಬೀದರ್ ಜಿಲ್ಲೆಯ ಹುಮನಾಬಾದನಲ್ಲಿ ರೇಷ್ಮೆ ಗೂಡಿನ ಮಾರುಕಟ್ಟೆ ಇದ್ದರೂ ಸಹ ರೈತರು ಹೆಚ್ಚಿನ ದರಕ್ಕಾಗಿ ರಾಮನಗರ, ಶಿಡ್ಲಘಟ್ಟ ಹಾಗೂ ಇತರ ರೇಷ್ಮೆ ಗೂಡಿನ ಮಾರುಕಟ್ಟೆಗಳಿಗೆ ತೆರಳಿ ಉತ್ತಮ ಧಾರಣೆಗೆ ರೇಷ್ಮೆ ಗೂಡನ್ನು ಮಾರಾಟ ಮಾಡುತ್ತಿದ್ದಾರೆ.<br>ಉತ್ತರ ಕರ್ನಾಟಕ ಭಾಗದ ರೇಷ್ಮೆ ಬೆಳೆಗಾರರು ಬೆಳೆದ ದ್ವಿತಳಿ/ಮಿಶ್ರತಳಿ ರೇಷ್ಮೆ ಗೂಡನ್ನು ರಾಜ್ಯದ ಯಾವುದೇ ಸರ್ಕಾರಿ ರೇಷ್ಮೆ ಗೂಡಿನ ಮಾರುಕಟ್ಟೆಗೆ ಸಾಗಾಣಿಕೆ ಮಾಡಿ ವಹಿವಾಟು ನಡೆಸಿದಲ್ಲಿ ರೇಷ್ಮೆ ಗೂಡು ಸಾಗಾಣಿಕೆ ವೆಚ್ಚಕ್ಕೆ ಪ್ರತಿ ಕೆ.ಜಿ.ಗೆ ರೂ.10/- ರಂತೆ ಪ್ರೋತ್ಸಾಹಧನ ನೀಡಲಾಗುತ್ತಿದೆ.<br>ಉತ್ತರ ಕರ್ನಾಟಕದಲ್ಲಿ ರೇಷ್ಮೆ ಬೆಳೆಗಾರರ ಸಂಖ್ಯೆಗೆ ಅನುಗುಣವಾಗಿ ರೇಷ್ಮೆ ನೂಲು ಬಿಚ್ಚಾಣಿಕಾದಾರರು ಇಲ್ಲದ ಕಾರಣ 09 ARM (Automatic Reeling Machine)ಗಳನ್ನು ಸ್ಥಾಪಿಸಲಾಗಿರುತ್ತದೆ. ಇನ್ನೂ 14 ARM (Automatic Reeling Machine)ಗಳ ಸ್ಥಾಪನೆಗೆ ಕ್ರಮ ವಹಿಸಲಾಗುತ್ತಿದೆ. ಪ್ರಸಕ್ತ ಸಾಲಿನಲ್ಲಿ ಬೀದರ್ ಜಿಲ್ಲೆಗೆ ಒಂದು ARM ಘಟಕವನ್ನು ಮಂಜೂರು ಮಾಡಲಾಗಿರುತ್ತದೆ.<br>ಉತ್ತರ ಕರ್ನಾಟಕದಲ್ಲಿ ರೇಷ್ಮೆ ಬೆಳೆಗಾರರಿಗೆ ಅತ್ಯಾಧುನಿಕ ಮಾರುಕಟ್ಟೆ ಸೌಲಭ್ಯವನ್ನು ಒದಗಿಸಲು ಕಲಬುರಗಿ ಮತ್ತು ಹಾವೇರಿ ಜಿಲ್ಲೆಯಲ್ಲಿ ನಬಾರ್ಡ್ ನೆರವಿನೊಂದಿಗೆ ರೂ.30 ಕೋಟಿ ವೆಚ್ಚದಲ್ಲಿ ಹೈಟೆಕ್ ಸರ್ಕಾರಿ ರೇಷ್ಮೆ ಗೂಡು ನಿರ್ಮಿಸಲು 2022-23ನೇ ಸಾಲಿನ ಆಯವ್ಯಯದಲ್ಲಿ ಸನ್ಮಾನ್ಯ ಮುಖ್ಯಮಂತ್ರಿಗಳು ಘೋಷಿಸಿರುತ್ತಾರೆ. ಅದರಂತೆ ಸ್ಥಳಾವಕಾಶವನ್ನು ಒದಗಿಸಿಕೊಂಡು ವಿಸ್ತೃತ ಯೋಜನಾ ವರದಿಯನ್ನು ತಯಾರಿಸಿ ನಬಾರ್ಡ್ ಸಂಸ್ಥೆಯ ಅನುಮೋದನೆಗೆ ಸಲ್ಲಿಸಲಾಗಿದೆ. |
| ಇ | ಸರ್ಕಾರವು ಈ ಬಗ್ಗೆ ಹೆಚ್ಚಿನ ಒತ್ತುಕೊಟ್ಟು ಹೆಚ್ಚಿನ ಸಿಬ್ಬಂದಿ ನೇಮಕ ಮಾಡಿದ್ದಲ್ಲಿ, ಉತ್ಪನ್ನ ಹೆಚ್ಚಿಸಲು ಸಾಧ್ಯವಾಗುತ್ತದೆ ಎಂದು ರೈತರು ಹೇಳುತ್ತಿರುವುದು ನಿಜವೇ: | ಬೀದರ್ ಜಿಲ್ಲೆಯಲ್ಲಿ ಒಟ್ಟು 440.00 ಹೆಕ್ಟೇರ್ ಹಿಪ್ಪುನೇರಳೆ ವಿಸ್ತೀರ್ಣವಿದ್ದು, 555 ರೇಷ್ಮೆ ಬೆಳೆಗಾರರಿದ್ದಾರೆ. ಬೀದರ್ ಜಿಲ್ಲೆಯಲ್ಲಿ ಹಾಲಿ 17 ಅಧಿಕಾರಿ / ಸಿಬ್ಬಂದಿಗಳು ಉತ್ತಮವಾಗಿ ಕಾರ್ಯನಿರ್ವಹಿಸುತ್ತಿದ್ದು, ಇಲಾಖೆಯ ಎಲ್ಲಾ ಕಾರ್ಯ ಚಟುವಟಿಕೆಗಳನ್ನು ನಿರ್ವಹಿಸುತ್ತಿದ್ದಾರೆ. |
| ಈ | ಹಾಗಿದ್ದಲ್ಲಿ, ರೈತರ ಅನುಕೂಲಕ್ಕಾಗಿ ಸಿಬ್ಬಂದಿಗಳನ್ನು ನೇಮಕ ಮಾಡಿ ಕೊಳ್ಳಲು ಕ್ರಮವಹಿಸಲಾಗುವುದೇ; ಇಲ್ಲದಿದ್ದಲ್ಲಿ, ಕಾರಣವೇನು? | ರೇಷ್ಮೆ ವಿಸ್ತರಣಾಧಿಕಾರಿಗಳ 78 ಹುದ್ದೆಗಳನ್ನು (ಹೈದರಾಬಾದ್ ಕರ್ನಾಟಕ ವೃಂದ-6 ಹುದ್ದೆಗಳು, ಉಳಿದ ಮೂಲ ವೃಂದ-72 ಹುದ್ದೆಗಳು) ಭರ್ತಿ ಮಾಡಲು ಕೆ.ಪಿ.ಎಸ್.ಸಿ.ಯಿಂದ ಈಗಾಗಲೇ ಅಧಿಸೂಚನೆ ಹೊರಡಿಸಲಾಗಿದೆ.<br>ರೇಷ್ಮೆ ಇಲಾಖೆಯಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ರೇಷ್ಮೆ ನಿರೀಕ್ಷಕರು, ರೇಷ್ಮೆ ಪ್ರದರ್ಶಕರು ಮತ್ತು ರೇಷ್ಮೆ ಪ್ರವರ್ತಕರು ವೃಂದದ 733 ನೇರ ನೇಮಕಾತಿ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆ ಚಾಲನೆಯಲ್ಲಿರುತ್ತದೆ. |

ಕಡತ ಸಂಖ್ಯೆ:ರೇಷ್ಮೆ 119 ರೇಸೇವಿ 2022

(ಡಾ.ನಾರಾಯಣಗೌಡ)
ರೇಷ್ಮೆ, ಯುವಸಬಲೀಕರಣ ಮತ್ತು ಕ್ರೀಡಾ ಸಚಿವರು